**Akashvani : Bangalore**
**National Bulletin In Kannada**
**11.04.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**11.04.2025 / 19.35 hrs**

**<><*<><>*><>**

ಮುಖ್ಯಾಂಶಗಳು

**೧. ವಾರಾಣಸಿಯಲ್ಲಿ ಮೂರು ಸಾವಿರದ ಲಲಳ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ**

**೨. 'ಡಿಆರ್‌ಡಿಒ' ದಿಂದ ಲಾಂಗ್ - ರೇಂಜ್ ಗ್ಲೈಡ್ ಬಾಂಬ್ 'ಗೌರವ್' ಪ್ರಯೋಗ ಯಶಸ್ವಿ**

**೩. ವೇವ್ಸ್ ೨೦೨೫; ಮುಂಬೈನಲ್ಲಿಂದು ಸಿದ್ಧತೆ ಪರಿಶೀಲಿಸಿದ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್**

**೪. ಐಪಿಎಲ್ ಟಿ-೨೦ ಕ್ರಿಕೆಟ್; ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಟಾಸ್ ಗೆದ್ದ ಕೋಲ್ಕತ್ತಾ ನೈಟ್ ರೈಡರ್ಸ್ ಫೀಲ್ಡಿಂಗ್ ಆಯ್ಕೆ**

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರಿಂದು ವಾರಾಣಸಿಯ ಮೆಹದಿಗಂಜ್‌ನಲ್ಲಿ ಮೂರು ಸಾವಿರದ ಲಲಳ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಳಳ ಅಭಿವೃದ್ಧಿ ಯೋಜನೆಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ವಾರಾಣಸಿಯ ಸರ್ವತೋಮುಖ ಬೆಳವಣಿಗೆಯನ್ನು ಖಚಿತಪಡಿಸುವ ಗುರಿಯೊಂದಿಗೆ ರಸ್ತೆ ಮೂಲಸೌಕರ್ಯ, ವಿದ್ಯುತ್, ಶಿಕ್ಷಣ ಮತ್ತು ಪ್ರವಾಸೋದ್ಯಮದ ಅಭಿವೃದ್ಧಿ ಸೇರಿದಂತೆ ವಿವಿಧ ಕ್ಷೇತ್ರಗಳಿಗೆ ಸಂಬಂಧಿಸಿದ ಯೋಜನೆಗಳಿಗೆ ಚಾಲನೆ ನೀಡಲಾಗಿದೆ. ಬಳಿಕ ನಡೆದ ಸಾರ್ವಜನಿಕ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ನಗರ ಕಂಡಿರುವ ತ್ವರಿತ ಪ್ರಗತಿಯ ಕುರಿತು ಪ್ರಸ್ತಾಪಿಸಿ, ಕಾಶಿ ಇನ್ನು ಪ್ರಾಚೀನತೆಯ ಸಂಕೇತ ಮಾತ್ರವಲ್ಲದೇ, ಪ್ರಗತಿಯ ಮಾದರಿಯಾಗಿ ಹೊರಹೊಮ್ಮಿದೆ ಎಂದು ಹೇಳಿದರು. ಮೂಲಸೌಕರ್ಯ ಅಭಿವೃದ್ಧಿ, ಧಾರ್ಮಿಕ ಪ್ರವಾಸೋದ್ಯಮ ಮತ್ತು ನಾಗರಿಕ ಸೌಲಭ್ಯಗಳ ಸುಧಾರಣೆ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿದ ಅವರು, ಇದು ಪ್ರಾಚೀನ ನಗರವನ್ನು ಆಧುನಿಕ ನಗರ ಕೇಂದ್ರವಾಗಿ ಮರುರೂಪಿಸಿದೆ ಎಂದರು. ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ೭೦ ವರ್ಷಕ್ಕಿಂತ ಮೇಲ್ಪಟ್ಟ ಮೂವರು ವೃದ್ಧರಿಗೆ ಆಯುಷ್ಮಾನ್ ಕಾರ್ಡ್‌ಗಳು, ಮೂರು

ಭೌಗೋಳಿಕ ಸೂಚನೆ - ಜಿಐ ಗಳಿಗೆ ಪ್ರಮಾಣಪತ್ರಗಳನ್ನು ಹಸ್ತಾಂತರಿಸಿದರು. ಇದೇ ವೇಳೆ ಬನಾಸ್ ಡೇರಿ ಅಮುಲ್‌ನೊಂದಿಗೆ ಸಂಬಂಧ ಹೊಂದಿರುವ ಉತ್ತರ ಪ್ರದೇಶದ ರೈತರಿಗೆ ಆರ್ಥಿಕ ಕೊಡುಗೆಯ ರೂಪದಲ್ಲಿ ೧೦೭ ಕೋಟಿ ರೂಪಾಯಿಗಳನ್ನು ವರ್ಗಾಯಿಸಲಾಯಿತು. ಬಳಿಕ ಮಧ್ಯಪ್ರದೇಶಕ್ಕೆ ಭೇಟಿ ನೀಡಿದ ಪ್ರಧಾನಿ ನರೇಂದ್ರ ಮೋದಿ, ಅಶೋಕನಗರ ಜಿಲ್ಲೆಯ ಇಸಾಘರ್ ತಾಲೂಕಿನ ಆನಂದಪುರ್ ಧಾಮ್‌ನಲ್ಲಿರುವ ಗುರು ಜಿ ಮಹಾರಾಜ್ ದೇವಾಲಯದಲ್ಲಿ ಪ್ರಾರ್ಥನೆ ಸಲ್ಲಿಸಿದರು. ನಂತರ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ಬಡವರು ಮತ್ತು ವಂಚಿತರನ್ನು ಮೇಲೆತ್ತುವ ಸಂಕಲ್ಪ, 'ಸಬ್ ಕಾ ಸಾಥ್, ಸಬ್ ಕಾ ವಿಕಾಸ್' ಎಂಬ ಮಂತ್ರ ಮತ್ತು ಸೇವಾ ಮನೋಭಾವ, ಇಂದಿನ ಸರ್ಕಾರದ ನೀತಿಯಾಗಿದೆ ಎಂದರು. ಬಡವರು ಮತ್ತು ಸಮಾಜದ ವಂಚಿತ ವರ್ಗಗಳ ಜೀವನ ಸುಲಭವಾಗುವಂತೆ ಕೇಂದ್ರ ಸರ್ಕಾರವು ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ್ ಯೋಜನೆ, ಆಯುಷ್ಮಾನ್ ಯೋಜನೆ, ಪ್ರಧಾನ ಮಂತ್ರಿ ಆವಾಸ್ ಯೋಜನೆ ಮತ್ತು ಜಲ ಜೀವನ್ ಮಿಷನ್ ನಂತಹ ವಿವಿಧ ಯೋಜನೆಗಳನ್ನು ಜಾರಿಗೊಳಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೨೭ ಸೆಕೆಂಡ್ಸ್)**

**<><*<><>*><>**

ಪೋರ್ಚುಗಲ್ ಮತ್ತು ಸ್ಲೋವಾಕಿಯಾಕ್ಕೆ ಯಶಸ್ವಿ ಭೇಟಿ ನೀಡಿದ ನಂತರ ರಾಷ್ಟ್ರಪತಿ ದ್ರೌಪದಿ ಮುರ್ಮು ಸ್ವದೇಶಕ್ಕೆ ತೆರಳಿದ್ದಾರೆ. ನವದೆಹಲಿಗೆ ತೆರಳುವ ಮೊದಲು ಸ್ಲೋವಾಕಿಯಾದ ಬ್ರಾಟಿಸ್ಲಾವಾದಲ್ಲಿ ಭಾರತೀಯ ವ್ಯಾಪಾರ ನಿಯೋಗದ ಸದಸ್ಯರೊಂದಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಸಂವಾದ ನಡೆಸಿದರು.

**<><*<><>*><>**

ಸು-೩೦ ಎಂಕೆಐ ವಿಮಾನದಿಂದ ಲಾಂಗ್-ರೇಂಜ್ ಗ್ಲೈಡ್ ಬಾಂಬ್ ಗೌರವ್‌ನ ಬಿಡುಗಡೆ ಪ್ರಯೋಗಗಳನ್ನು ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ-ಡಿಆರ್‌ಡಿಒ, ಯಶಸ್ವಿಯಾಗಿ ನಡೆಸಿದೆ. ರಕ್ಷಣಾ ಸಚಿವಾಲಯದ ಪ್ರಕಾರ, ಈ ಪ್ರಯೋಗಗಳು ನೂರು ಕಿಲೋಮೀಟರ್‌ಗಳ ವ್ಯಾಪ್ತಿಯೊಳಗೆ ನಿಖರತೆಯೊಂದಿಗೆ ಯಶಸ್ವಿಯಾಗಿ ಪ್ರದರ್ಶಿಸಿವೆ. ಗೌರವ್, ಒಂದು ಸಾವಿರ ಕಿಲೋಗ್ರಾಮ್ ತೂಕ ವಿಭಾಗದ ಗ್ಲೈಡ್ ಬಾಂಬ್ ಆಗಿದ್ದು, ಇದನ್ನು ಒಡಿಶಾದ ಚಂಡಿಪುರದಲ್ಲಿರುವ ಸಂಶೋಧನಾ ಕೇಂದ್ರ ಇಮಾರತ್, ಶಸ್ತ್ರಾಸ್ತ್ರ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಹಾಗೂ ಸಂಯೋಜಿತ ಪರೀಕ್ಷಾ ಶ್ರೇಣಿಯಿಂದ ಸ್ಥಳೀಯವಾಗಿ ವಿನ್ಯಾಸಗೊಳಿಸಲಾಗಿದೆ ಮತ್ತು

ಅಭಿವೃದ್ಧಿಪಡಿಸಲಾಗಿದೆ. ಡಿಆರ್‌ಡಿಒ ಮತ್ತು ಭಾರತೀಯ ವಾಯುಪಡೆಯ ಹಿರಿಯ ಅಧಿಕಾರಿಗಳು ಭಾಗವಹಿಸಿ, ಈ ಪ್ರಯೋಗಗಳನ್ನು ಪರಿಶೀಲಿಸಿದರು. ಗೌರವ್‌ನ ಯಶಸ್ವಿ ಅಭಿವೃದ್ಧಿ ಮತ್ತು ಪ್ರಯೋಗಗಳಿಗಾಗಿ ಡಿಆರ್‌ಡಿಒ, ಭಾರತೀಯ ವಾಯುಪಡೆ ಮತ್ತು ರಕ್ಷಣಾ ಉದ್ಯಮವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶ್ಲಾಘಿಸಿದ್ದಾರೆ.

**<><*<><>*><>**

ಮುಂಬೈನಲ್ಲಿ ಮೇ ೧ ರಿಂದ ೪ರವರೆಗೆ ನಡೆಯಲಿರುವ ವಿಶ್ವ ಶ್ರವಣ, ದೃಶ್ಯ ಮತ್ತು ಮನೋರಂಜನ ಶೃಂಗಸಭೆ-ವೇವ್ಸ್, ಹಿನ್ನೆಲೆಯಲ್ಲಿ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಮುಂಬೈನಲ್ಲಿಂದು ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರೊಂದಿಗೆ ವೇವ್ಸ್ ಸಿದ್ಧತೆಗಳನ್ನು ಪರೀಶಿಲಿಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಅಶ್ವಿನಿ ವೈಷ್ಣವ್, ಸೃಜನಶೀಲ ವಲಯದಿಂದ ಹೊರಹೊಮ್ಮುತ್ತಿರುವ ಆರ್ಥಿಕತೆಯಲ್ಲಿ ಮಹಾರಾಷ್ಟ್ರ ಪ್ರಮುಖವಾದ ಸ್ಥಾನವನ್ನು ಹೊಂದಿವೆ. ವೇಗವಾಗಿ ಬದಲಾಗುತ್ತಿರುವ ತಂತ್ರಜ್ಞಾನದ ಯುಗದಲ್ಲಿ ಈ ಸ್ಥಾನವನ್ನು ಕಾಯ್ದುಕೊಳ್ಳುವ ಗುರಿಯೊಂದಿಗೆ ವೇವ್ಸ್-೨೦೨೫ ಅನ್ನು ಮುಂಬೈನಲ್ಲಿ ಆಯೋಜಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಮಾತನಾಡಿ, ಜಾಗತಿಕವಾಗಿ ಸೃಜನಶೀಲ ವಲಯದಲ್ಲಿ ವೇವ್ಸ್ ಅತಿದೊಡ್ಡ ಸಮ್ಮೇಳನವಾಗಿದ್ದು, ನೂರಕ್ಕೂ ಹೆಚ್ಚು ದೇಶಗಳ ಪ್ರತಿನಿಧಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಸೃಜನಶೀಲ ಆರ್ಥಿಕತೆ ಕ್ಷೇತ್ರದಲ್ಲಿ ಭಾರತವು ಪ್ರಮುಖ ಸ್ಥಾನವನ್ನು ಪಡೆಯಲಿದೆ ಎಂದು ಅವರು ಪ್ರತಿಪಾದಿಸಿದರು.

**<><*<><>*><>**

ಯುರೋಪಿಯನ್ ಒಕ್ಕೂಟದೊಂದಿಗೆ ಮುಕ್ತ ವ್ಯಾಪಾರ ಒಪ್ಪಂದವನ್ನು ತ್ವರಿತಗೊಳಿಸಲು ಕೇಂದ್ರ ಸರ್ಕಾರ ಕಾರ್ಯ ನಿರ್ವಹಿಸುತ್ತಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ.  ಇಟಲಿ-ಭಾರತ ವ್ಯವಹಾರ, ವಿಜ್ಞಾನ ಮತ್ತು ತಂತ್ರಜ್ಞಾನ ಸಮಾವೇಶದಲ್ಲಿಂದು ಮಾತನಾಡಿದ ಅವರು, ಯುರೋಪಿಯನ್ ಒಕ್ಕೂಟದ ಸದಸ್ಯರಿಗೆ ಭಾರತ ಪ್ರಮುಖ ಮಾರುಕಟ್ಟೆಯಾಗಿ ಹೊರಹೊಮ್ಮಿದೆ ಎಂದರು.  ಜಾಗತಿಕ ಮಾರುಕಟ್ಟೆಗೆ ಅನುಗುಣವಾಗಿ ಉತ್ಪಾದನೆಯ ಪ್ರಮಾಣವನ್ನು ಭಾರತ ಹೆಚ್ಚಿಸುತ್ತಿದೆ. ಭಾರತ-ಇಟಲಿ ಜಂಟಿ ಕಾರ್ಯತಂತ್ರದ ಕ್ರಿಯಾ ಯೋಜನೆ ೨೦೨೫-೨೦೨೯, ಉಭಯ ರಾಷ್ಟ್ರಗಳಿಗೆ

ಲಾಭದಾಯಕವಾಗಿದೆ ಎಂದು ಸಚಿವರು ಹೇಳಿದರು. ಇಟಲಿ-ಭಾರತ ವ್ಯವಹಾರ, ವಿಜ್ಞಾನ ಮತ್ತು ತಂತ್ರಜ್ಞಾನ ವೇದಿಕೆಯು, ಭಾರತೀಯ ಮತ್ತು ಇಟಲಿಯ ವ್ಯಾಪಾರ ಸಮುದಾಯಗಳ ನಡುವೆ ಪರಸ್ಪರ ಸಹಯೋಗವನ್ನು ಬೆಳೆಸುವ ಗುರಿ ಹೊಂದಿದೆ. ಇದು ಉಭಯ ದೇಶಗಳ ಉದ್ಯಮ ನಾಯಕರನ್ನು ಒಟ್ಟುಗೂಡಿಸಿ, ಕೈಗಾರಿಕೆ ೪.೦, ಇಂಧನ ಪರಿವರ್ತನೆ, ಮೂಲಸೌಕರ್ಯ, ಅತ್ಯಾಧುನಿಕ ತಂತ್ರಜ್ಞಾನಗಳು, ನಾವೀನ್ಯತೆ, ಮುಂತಾದ ನಿರ್ಣಾಯಕ ವಲಯಗಳಲ್ಲಿ ಸಹಯೋಗ ಮತ್ತು ಪಾಲುದಾರಿಕೆಗಾಗಿ ಅವಕಾಶಗಳನ್ನು ಅನ್ವೇಷಿಸುತ್ತದೆ ಎಂದು ಸಚಿವ ಪಿಯುಷ್ ಗೋಯಲ್ ತಿಳಿಸಿದರು.

<><*<><>*><>

ಎಐಎಡಿಎಂಕೆ ನೇತೃತ್ವದ ಮೈತ್ರಿಕೂಟದಲ್ಲಿ ಬಿಜೆಪಿ, ೨೦೨೬ರ ತಮಿಳುನಾಡು ವಿಧಾನಸಭೆ ಚುನಾವಣೆಯನ್ನು ಎದುರಿಸಲಿದೆ ಎಂದು ಬಿಜೆಪಿ ಹಿರಿಯ ನಾಯಕ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ಚೆನ್ನೈನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮಿಳುನಾಡಿನ ಯುವಕರಿಗೆ ತಮಿಳು ಭಾಷೆಯಲ್ಲಿ ಯುಪಿಎಸ್‌ಸಿ ಪರೀಕ್ಷೆಗಳನ್ನು ಬರೆಯಲು ಅವಕಾಶ ನೀಡಿದ್ದು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಎಂದು ಹೇಳಿದರು. ತಮಿಳುನಾಡಿನ ಡಿಎಂಕೆ ಸರ್ಕಾರವು, ವಿದ್ಯಾರ್ಥಿಗಳಿಗೆ ತಮಿಳು ಭಾಷೆಯಲ್ಲಿ ವೈದ್ಯಕೀಯ ಮತ್ತು ಎಂಜಿನಿಯರಿಂಗ್ ಕಲಿಯಲು ಅವಕಾಶ ನೀಡುತ್ತಿಲ್ಲ. ಆದರೆ ತ್ರಿಭಾಷಾ ನೀತಿಯ ಬಗ್ಗೆ ದ್ವಂದ್ವ ನೀತಿಯನ್ನು ಹೊಂದಿದೆ ಎಂದು ಅವರು ಆರೋಪಿಸಿದರು. ಡಿಎಂಕೆ ಮತ್ತು ಕಾಂಗ್ರೆಸ್ ಪಕ್ಷಗಳಿಗೆ ಜನರ ಅಗತ್ಯತೆಗಳ ಬಗ್ಗೆ ತಿಳಿದಿಲ್ಲ. ತಮ್ಮದೇ ಆದ ಕಾರ್ಯಸೂಚಿಗಳ ಮೇಲೆ ಅವು ಕೇಂದ್ರೀಕರಿಸಿವೆ ಎಂದು ಸಚಿವ ಅಮಿತ್ ಶಾ ದೂರಿದರು.

<><*<><>*><>

ಹುರಿಯತ್-ಸಂಬಂಧಿತ ಮತ್ತೊಂದು ಸಂಘಟನೆಯಾದ ಜಮ್ಮು ಮತ್ತು ಕಾಶ್ಮೀರ ಸಾಮೂಹಿಕ ಚಳುವಳಿಯು ಪ್ರತ್ಯೇಕತಾವಾದವನ್ನು ತಿರಸ್ಕರಿಸಿದ್ದು, ಭಾರತದ ಏಕತೆಗೆ ತನ್ನ ಸಂಪೂರ್ಣ ಬದ್ಧತೆಯನ್ನು ಘೋಷಿಸಿದೆ.  ಇಲ್ಲಿಯವರೆಗೆ, ಹುರಿಯತ್-ಸಂಬಂಧಿತ ೧೨ ಸಂಘಟನೆಗಳು ಪ್ರತ್ಯೇಕತಾವಾದದಿಂದ ಹೊರಬಂದು ಸಂವಿಧಾನದ ಮೇಲೆ ನಂಬಿಕೆ ಇಟ್ಟಿವೆ. ಪ್ರಸ್ತುತ ಕೇಂದ್ರ ಸರ್ಕಾರದ ಅಡಿಯಲ್ಲಿ, ಜಮ್ಮು ಮತ್ತು ಕಾಶ್ಮೀರದಲ್ಲಿ ಏಕತೆಯ ಮನೋಭಾವ ಮೇಲುಗೈ ಸಾಧಿಸಿದೆ ಎಂದು ಸಾಮಾಜಿಕ ಜಾಲತಾಣದ ತಮ್ಮ ಪೋಸ್ಟ್‌ನಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

<><*<><>*><>

ಕೇಂದ್ರ ಸರ್ಕಾರವು ದೇಶದ ಜನರಿಗೆ ಆರೋಗ್ಯ ಸೇವೆಯನ್ನು ಹೆಚ್ಚು ಸುಲಭ ಮತ್ತು ಕೈಗೆಟುಕುವಂತೆ ಮಾಡಿವೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಮನ್ಸುಖ್ ಮಾಂಡವಿಯಾ ತಿಳಿಸಿದ್ದಾರೆ. ಹರಿಯಾಣದ ಫರಿದಾಬಾದ್‌ನ ಇ.ಎಸ್.ಐ.ಸಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ೨ನೇ ಪದವಿ ಪ್ರದಾನ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಅವರು, ದೇಶದ ಎಲ್ಲಾ ವೈದ್ಯರು ರಾಷ್ಟ್ರ ಮೊದಲು ಎನ್ನುವ ಉತ್ಸಾಹದಿಂದ ಕೆಲಸ ಮಾಡಬೇಕು ಹಾಗೂ ವೈದ್ಯರ ನಡವಳಿಕೆಯು ಮಾನವೀಯತೆಯಿಂದ ಕೂಡಿರಬೇಕು ಎಂದು ಅವರು ಸಲಹೆ ನೀಡಿದರು.

<><*<><>*><>

೨೦೨೬ ರ ಗಣರಾಜ್ಯೋತ್ಸವದ ಅಂಗವಾಗಿ ನೀಡಲಾಗುವ ಪದ್ಮ ಪ್ರಶಸ್ತಿಗಳಿಗೆ ನಾಮ ನಿರ್ದೇಶನ ಮಾಡಲು ಈ ವರ್ಷದ ಜುಲೈ ೩೧ರವರೆಗೆ ಅವಕಾಶವಿದೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ. ನಾಮ ನಿರ್ದೇಶನಗಳ ಪ್ರಕ್ರಿಯೆಯು ೨೦೨೫ರ ಮಾರ್ಚ್ ೧೫ ರಿಂದ ಪ್ರಾರಂಭವಾಗಿದ್ದು, ನಾಮನಿರ್ದೇಶನಗಳು ಮತ್ತು ಶಿಫಾರಸುಗಳನ್ನು ರಾಷ್ಟ್ರೀಯ ಪುರಸ್ಕಾರ ಆನ್‌ಲೈನ್ ಪೋರ್ಟಲ್‌ನಲ್ಲಿ ಮಾತ್ರ ಸ್ವೀಕರಿಸಲಾಗುತ್ತದೆ ಎಂದು ಸಚಿವಾಲಯ ಮಾಹಿತಿ ನೀಡಿದೆ. ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಲ್ಲಿ ಪದ್ಮವಿಭೂಷಣ, ಪದ್ಮ ಭೂಷಣ, ಪದ್ಮಶ್ರೀ ಸೇರಿವೆ. ಕಲೆ, ಸಾಹಿತ್ಯ ಮತ್ತು ಶಿಕ್ಷಣ, ವೈದ್ಯಕೀಯ, ಸಾಮಾಜಿಕ ಕಾರ್ಯ, ವಿಜ್ಞಾನ ಮತ್ತು ಎಂಜಿನಿಯರಿಂಗ್, ಸಾರ್ವಜನಿಕ ವ್ಯವಹಾರಗಳು, ನಾಗರಿಕ ಸೇವೆ ಹಾಗೂ ವ್ಯಾಪರ ಮತ್ತು ಕೈಗಾರಿಕಾ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿದ ವ್ಯಕ್ತಿಗಳು, ಯಾವುದೇ ಸ್ಥಾನ ಅಥವಾ ಲಿಂಗ ಭೇದವಿಲ್ಲದೆ ಅರ್ಜಿಯನ್ನು ಸಲ್ಲಿಸಬಹುದು ಎಂದು ಗೃಹ ಸಚಿವಾಲಯ ತಿಳಿಸಿದೆ.

<><*<><>*><>

ಬಜಾಜ್ ಆಟೋ ಲಿಮಿಟೆಡ್‌ನ ಮಾಜಿ ಉಪಾಧ್ಯಕ್ಷ ಮಧುರ್ ಬಜಾಜ್, ಇಂದು ಬೆಳಗ್ಗೆ ಮುಂಬೈನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಅವರಿಗೆ ೭೩ ವರ್ಷ ವಯಸ್ಸಾಗಿತ್ತು. ಕೆಲವು ದಿನಗಳ ಹಿಂದೆ ಆರೋಗ್ಯ ಸಮಸ್ಯೆಯಿಂದಾಗಿ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಎರಡು ದಿನಗಳ ಹಿಂದೆ ಪಾರ್ಶ್ವವಾಯುವಿಗೆ ಒಳಗಾದ ಅವರು, ಇಂದು ಬೆಳಗ್ಗೆ ನಿಧನರಾದರು. ಅವರ ನಿಧನಕ್ಕೆ, ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಸೇರಿದಂತೆ ಗಣ್ಯರು ಸಂತಾಪ ಸೂಚಿಸಿದ್ದಾರೆ.

<><*><>*<>

ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಕೋಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಕೋಲ್ಕತ್ತಾ ನೈಟ್ ರೈಡರ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ

<><*><>*<>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ಒಂದು ಸಾವಿರದ ೩೧೦ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೫ ಸಾವಿರದ ೧೫೭ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ, ೪೨೯ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೨ ಸಾವಿರದ ೮೨೯ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಿಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೬ ರೂಪಾಯಿ ೫ ಪೈಸೆಯಷ್ಟಾಗಿದೆ.

<><*><>*<>

ಜುಲೈ ೯ ರೊಳಗೆ ಅಮೆರಿಕದೊಂದಿಗೆ ಒಪ್ಪಂದಕ್ಕೆ ಬರಲು ವಿಫಲವಾದ ರಾಷ್ಟ್ರಗಳ ಮೇಲೆ ಪುನಃ ಪ್ರತಿಸುಂಕಗಳನ್ನು ವಿಧಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

**<><*> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*<>**

**<><*>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*<>**